ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016–17 ದಿನಾಂಕ: 14–06–2016

# ಪತ್ರಿಕಾ ಪ್ರಕಟಣೆ

## ಮನೆಯಂಗಳದಲ್ಲಿ ಮಾತುಕತೆ :
## ತಿಂಗಳ ಅತಿಥಿ ಟಿ. ಎಲ್. ರಾಮಸ್ವಾಮಿ

ಬೆಂಗಳೂರು, ಜೂನ್ 14 (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶನಾಲಯವು ಜೂನ್ 18 ರ ಶನಿವಾರದಂದು ಸಂಜೆ 4–00 ಗಂಟೆಗೆ ಹಮ್ಮಿಕೊಂಡಿರುವ ಮನೆಯಂಗಳದಲ್ಲಿ ಮಾತುಕತೆ ಕಾರ್ಯಕ್ರಮದಲ್ಲಿ ತಿಂಗಳ ಅತಿಥಿಯಾಗಿ ಹಿರಿಯ ಪತ್ರಿಕಾ ಛಾಯಾಗ್ರಾಹಕ ಶ್ರೀ ಟಿ. ಎಲ್. ರಾಮಸ್ವಾಮಿ ಅವರು ಪಾಲ್ಗೊಳ್ಳಲಿದ್ದಾರೆ.

ಅಂದು ಮಧ್ಯಾಹ್ನ 3–00 ಗಂಟೆಗೆ ಶ್ರೀಮತಿ ಪ್ರತಿಭಾ ಗೋನಾಳ ಅವರಿಂದ ಸುಗಮ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಬಾಬು::ಜಿಪಿಆರ್

## ದಾಖಲಾತಿ ಪರಿಶೀಲನೆ

ಬೆಂಗಳೂರು, ಜೂನ್ 14 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು 2015 ರ ಅಕ್ಟೋಬರ್‌ನಲ್ಲಿ ನಡೆಸಿದ 2015 ನೇ ಸಾಲಿನ ರಾಜ್ಯದ ವಿವಿಧ ಇಲಾಖೆಗಳಲ್ಲಿನ ಸಹಾಯಕರು/ಪ್ರಥಮ ದರ್ಜೆ ಸಹಾಯಕರ ನೇಮಕಾತಿಗೆ ಸಂಬಂಧಿಸಿದಂತೆ ನಡೆಸಿದ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತದಲ್ಲಿನ ಹಿರಿಯ ಸಹಾಯಕರ ಹುದ್ದೆಗಳ ನೇಮಕಾತಿಗೆ ಅಭ್ಯರ್ಥಿಗಳು ಪಡೆದ ಅಂಕಗಳ ಜೇಷ್ಠತೆಯನುಸಾರ ಹಾಗೂ ಅವರ ಮೀಸಲಾತಿಗಳಿಗೆ ಅನುಗುಣವಾಗಿ 1:4 ಅನುಪಾತದಲ್ಲಿ ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ನೋಂದಣಿ ಸಂಖ್ಯೆಗಳನ್ನು ಆಯೋಗದ ಅಂಗಜಾಲ http://kpsc.kar.nic.in. ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ. ಮೂಲ ದಾಖಲೆಗಳ ಪರಿಶೀಲನಾ ದಿನಾಂಕವನ್ನು ಸಧ್ಯದಲ್ಲೇ ಪ್ರಕಟಿಸಲಾಗುವುದು.

ಬಾಬು::ಜಿಪಿಆರ್

# Documents Verification

Bengaluru, June 14th (Karnataka Information)

**Register numbers of the candidates eligible for verification of original documents at the ratio of 1:4 prepared on the basis of the marks obtained in the competitive examination held by the Commission on 03-10-2015 and 04-10-2015 for posts of Senior Assistant in the department of Food and Civil Supplies Corporation Limited which was notified along with the recruitment for the post of Assistants/First Division Assistants in various departments of the State (2015) is published in the Commission's website http://kpsc.kar.nic.in.The date of original documents verification will be announced shortly.**

**babu:gpr.**

## ಸಿಬ್ಬಂದಿ ನೇಮಕಾತಿ

ಬೆಂಗಳೂರು, ಜೂನ್ 14 (ಕರ್ನಾಟಕ ವಾರ್ತೆ)

ಜಿಲ್ಲಾ ಅಂಗವಿಕಲ ಪುನರ್ವಸತಿ ಕೇಂದ್ರಕ್ಕೆ ಗೌರವ ಧನದ ಆಧಾರದ ಮೇಲೆ ಸಂದರ್ಶನದ ಮೂಲಕ ವಿವಿಧ ಹುದ್ದೆದಗಳಿಗೆ ಸಿಬ್ಬಂದಿಗಳನ್ನು ನೇಮಕಾತಿ ಮಾಡಿಕೊಳ್ಳಲು 18–45 ವರ್ಷಗಳ ವಯೋಮಿತಿಯಲ್ಲಿರುವ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ಹುದ್ದೆ ಮತ್ತು ವಿದ್ಯಾರ್ಹತೆಗನುಣವಾಗಿ ಸ್ವ–ವಿವರದೊಂದಿಗೆ ನಿಗದಿತ ನಮೂನೆಯಲ್ಲಿ ಅರ್ಜಿ ತಯಾರಿಸಿ ದೂರವಾಣಿ ಮತ್ತು ಮೊಬೈಲ್ ಸಂಖ್ಯೆ ಬರೆದು ಅಗತ್ಯ ದಾಖಲೆಗಳೊಂದಿಗೆ ಅಧ್ಯಕ್ಷರು/ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರ, ರವಿ ಕಿರ್ಲೋಸ್ಕರ್ ಮೆಮೋರಿಯಲ್ ಆಸ್ಪತ್ರೆ 1 ನೇ ಹಂತ, ಇಂಡಸ್ಟ್ರೀಯಲ್ ಏರಿಯಾ ಪೀಣ್ಯ, ಬೆಂಗಳೂರು – 560 058 ರವರ ಹೆಸರಿನಲ್ಲಿ ಮುದ್ದಾಂ ಅಥಾವ ಅಂಚೆ ಮೂಲಕ ದಿನಾಂಕ: 27–06–2016 ಸಂಜೆ 4–00 ಗಂಟೆಯೊಳಗೆ ಅರ್ಜಿ ಸಲ್ಲಿಸತಕ್ಕದ್ದು. ಆಯ್ಕೆಯಾದ ಅರ್ಹ ಅಭ್ಯರ್ಥಿಗಳಿಗ ದೂರವಾಣಿ ಮೂಲಕ ತಿಳಿಸಲಾಗುವುದು. ಹೆಚ್ಚಿನ ವಿವರಗಳಿಗೆ ದೂರವಾಣಿ ಸಂಖ್ಯೆ 9164496483 ಮೂಲಕ ಸಂಪರ್ಕಿಸಬಹುದಾಗಿದೆ.

ಬಾಬು::ಜಿಪಿಆರ್

## ಡಾ. ಸರೋಜಿನಿ ಮಹಿಷಿ ವರದಿಯ ಪುನರ್ ಪರಿಶೀಲನಾ ಸಮಿತಿ ರಚನೆ

ಬೆಂಗಳೂರು, ಜೂನ್ 14(ಕರ್ನಾಟಕ ವಾರ್ತೆ)

ಕರ್ನಾಟಕದಲ್ಲಿರುವ ಕೇಂದ್ರ ಸ್ವಾಮ್ಯದ ಉದ್ದಿಮೆ/ಸಂಸ್ಥೆ/ಕೈಗಾರಿಕೆ/ ಕಛೇರಿಗಳು ಹಾಗೂ ಇತರೆ ಖಾಸಗಿ ಕೈಗಾರಿಕೆಗಳಲ್ಲಿ ಕನ್ನಡಿಗರಿಗೆ/ಸ್ಥಳೀಯರಿಗೆ ಉದ್ಯೋಗಾವಕಾಶವನ್ನು ಕಲ್ಪಿಸುವ ದೃಷ್ಠಿಯಿಂದ ಸರ್ಕಾರ ರಚಿಸಲಾದ ಡಾ. ಸರೋಜಿನಿ ಮಹಿಷಿ ವರದಿಯನ್ನು ಇಂದಿನ ಕಾಲಘಟ್ಟಕ್ಕೆ ಹೊಂದುವ ರೀತಿಯಲ್ಲಿ ಸಮಗ್ರವಾಗಿ ಪರಿಷ್ಕರಿಸಲು ಕನ್ನಡ ನಾಡು–ನುಡಿ ಹಾಗೂ ಆಡಳಿತದಲ್ಲಿ ಅನುಭವವಿರುವ

ಸದಸ್ಯರನ್ನೊಳಗೊಂಡ “ಡಾ. ಸರೋಜಿನಿ ಮಹಿಷಿ ವರದಿಯ ಪುನರ್ ಪರಿಶೀಲನಾ ಸಮಿತಿ”ಯನ್ನು ಸರ್ಕಾರ ರಚಿಸಿದೆ.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಎಲ್. ಹನುಮಂತಯ್ಯ ರವರ ಅಧ್ಯಕ್ಷತೆಯಲ್ಲಿ “ಡಾ. ಸರೋಜಿನಿ ಮಹಿಷಿ ವರದಿಯ ಪುನರ್ ಪರಿಶೀಲನಾ ಸಮಿತಿ”ಯನ್ನು ಸರ್ಕಾರ ರಚಸಿದ್ದು, ಈ ಸಮಿತಿಗೆ ಕರ್ನಾಟಕ ನಾಟಕ ಅಕಾಡೆಮಿಯ ನಿಕಟಪೂರ್ವ ಅಧ್ಯಕ್ಷರಾದ ಶ್ರೀ ಗೊ. ರು. ಚನ್ನಬಸಪ್ಪ, ಕರ್ನಾಟಕ ಚಿತ್ರಕಲಾ ಪರಿಷತ್ತಿನ ಅಧ್ಯಕ್ಷರಾದ ಶ್ರೀ ಬಿ. ಎಲ್. ಶಂಕರ್, ಸಾಹಿತಿಗಳಾದ ಶ್ರೀಮತಿ ಹೇಮಲತಾ ಮಹಿಷಿ, ಕರ್ನಾಟಕ ಕಾರ್ಮಿಕ ಲೋಕ ಪತ್ರಿಕೆಯ ಸಂಪಾದಕರಾದ ಶ್ರೀ ರಾ ನಂ ಚಂದ್ರಶೇಖರ್ ರವರನ್ನು ಸದಸ್ಯರಾಗಿ ನೇಮಕ ಮಾಡಿದೆ. ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಗಳಾದ ಡಾ. ಕೆ. ಮುರಳಿಧರ ರವರನ್ನು ಸದಸ್ಯ ಕಾರ್ಯದರ್ಶಿಗಳನ್ನಾಗಿ ನೇಮಕ ಮಾಡಿ ಆದೇಶ ಹೊರಡಿಸಿದೆ. ಆದೇಶವನ್ನು ಇದರೊಂದಿಗೆ ಲಗತ್ತಿಸಿದೆ.

ಬಾಬು/ಕೆಎಂ